# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು –02.**

ಸಂಖ್ಯೆ: ಜಂನಿನಯೋ (ದ)/ಪ್ರಾ.ಪ/ಸನಿ/01/2022-23 ದಿನಾಂಕ: 13-04-2022.

## ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಖಾತಾ ಸಂಖ್ಯೆ: 3745/55/2/6283/205, ಹಲಗೇವಡೇರಹಳ್ಳಿ ಗ್ರಾಮ, ಕೆಂಗೇರಿ ಹೋಬಳಿ, ವಾರ್ಡ್ ನಂ: 198, ರಾಜರಾಜೇಶ್ವರಿನಗರ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ತಮ್ಮ ಮನವಿ ಪತ್ರ ದಿನಾಂಕ: 18-01-2022.

2) ಕಟ್ಟಡದ ನಕ್ಷೆ ಮಂಜೂರಾತಿ ಎಲ್.ಪಿ ಸಂಖ್ಯೆ: BBMP/ Addl.Dir/JD South/LP/0018/20-21 ದಿನಾಂಕ: 26–07–2021.

3) ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ದಿನಾಂಕ: 19-03-2022.

*****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಮನವಿಯನ್ವಯ ಖಾತಾ ಸಂಖ್ಯೆ: 3745/55/2/6283/205, ಹಲಗೇವಡೇರಹಳ್ಳಿ ಗ್ರಾಮ, ಕೆಂಗೇರಿ ಹೋಬಳಿ, ವಾರ್ಡ್ ನಂ: 198, ರಾಜರಾಜೇಶ್ವರಿನಗರ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ತಳ + ನೆಲ + ಮೇಲಿನ 5 ಅಂತಸ್ತುಗಳ 96 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕಛೇರಿಯಿಂದ ಎಲ್.ಪಿ. ಸಂಖ್ಯೆ: BBMP/ Addl.Dir/JD South/LP/0018/20-21 ದಿನಾಂಕ: 26–07–2021 ರಂದು ನಕ್ಷೆ ಮಂಜೂರಾತಿಯನ್ನು ಉಲ್ಲೇಖ (2) ರಂತೆ ಅನುಮೋದನೆಯನ್ನು ನೀಡಲಾಗಿರುತ್ತದೆ.

ಅದರನ್ವಯ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ಮೇರೆಗೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಂಬಂಧ ಅಗತ್ಯ ಶುಲ್ಕವಾದ ರೂ. 1,98,000/– ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000003 ದಿನಾಂಕ: 13-04-2022 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ಅನುಮತಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

4) ಸ್ವತ್ತಿಗೆ ಸಂಬಂಧಿಸಿದಂತೆ ಕಟ್ಟಡ ನಕ್ಷೆ ಮಂಜೂರಾತಿ ಪಡೆಯುವ ಸಮಯದಲ್ಲಿ ದಿನಾಂಕ: 15–04–2021 ರಂದು ನೀಡಿರುವ ಶುಲ್ಕ ಪಾವತಿ ತಿಳುವಳಿಕೆ ಪತ್ರಕ್ಕೆ ಘನ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 8951/2021 (LB-BMP) ರ ಮಧ್ಯಂತರ ತಡೆಯಾಜ್ಞೆಯಲ್ಲಿ ನೀಡಿರುವ ಶುಲ್ಕಗಳಿಗೆ ಕರ್ನಾಟಕ ನಗರ ಪಾಲಿಕೆ ಅಧಿನಿಯಮ 1976 ಕಲಂ 299(ಎ) ಹಾಗೂ ಬಿಬಿಎಂಪಿ ಕಾಯ್ದೆ 2020 ಕಲಂ 240 (ಎ) ಯಲ್ಲಿ ಶುಲ್ಕಗಳನ್ನು ಪಾವತಿಸಿಕೊಳ್ಳಲು ತಿದ್ದುಪಡಿ ಮಾಡಿರುವುದರಿಂದ ಪಾಲಿಕೆಯ ಕಛೇರಿ ಆದೇಶ ದಿನಾಂಕ: 24–06–2021 & 09–03–2022 ರನ್ವಯ ಶುಲ್ಕಗಳನ್ನು ಕಟ್ಟಡದ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವ ಮುನ್ನ ಪಾವತಿಸುತ್ತೇನೆಂದು ಸಲ್ಲಿಸಿರುವ ಮುಚ್ಚಳಿಕೆ ಪತ್ರಕ್ಕೆ ಬದ್ಧರಿರತಕ್ಕದ್ದು.

13/4/22

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

18/4/22

13/04 13/04 13/04/22

5) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

6) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

7) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಒಳಸಿಕೊಳ್ಳುವುದು.

8) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

9) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

Smt. Nagarathna .A.S (Khatha Holder)
M/s. Chaitrashree Developers (GPA Holder)
Rep by its Partners Sri. M. Venkteshulu
# 70, Opp. Darshni Floorings, Kaverinagar,
Banashankari 3rd Stage, Bangalore – 560 085.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು (ಕೆಂಗೇರಿ) ವಿಭಾಗ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

13/4/22

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

13/04 13/04 13/4/22